ದಿನಾಂಕ 05-12-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆ : ಅರ್ಜಿದಾರರ ಪರ ಶ್ರೀ ಆರ್.ಬಿ.ಕೆ ವಕೀಲರಿಂದಃ</u>**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ವಿವಾಹದ ಆಮಂತ್ರಣ ಪತ್ರಿಕೆ ಹಾಜರುಪಡಿಸಿದ್ದು, ಅದನ್ನು ನಿ.ಪಿ-1 ಎಂದು, ಠಾಣಾಧಿಕಾರಿ, ಶಿರಾಳಕೊಪ್ಪ ಪೊಲೀಸ್ ಠಾಣೆ ರವರು ನೀಡಿದ ಸ್ವೀಕೃತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-2 ಎಂದು, ದಿಃ 18-02-2022 ರಂದು ಸಂರಕ್ಷಣಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ, ಶಿಕಾರಿಪುರ ಅವರು ಅರ್ಜಿದಾರರಿಗೆ ನೀಡಿದ ವಿಚಾರಣಾ ನೋಟೀಸನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-3 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ ಎದುರುಗಾರರ ಪರ ಶ್ರೀ ಸಿ.ಪಿ.ಜೆ ವಕೀಲರಿಂದಃ</u>**

ಪಾಟೀ ಸವಾಲಿಗೆ ಸಮಯ ಕೋರಿರುತ್ತಾರೆ. ನ್ಯಾಯ ಮತ್ತು ಸಮ್ಮತತೆ ಆಧಾರದ ಮೇರೆಗೆ ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೆ ಸರಿ ಇದೆ ಎಂದು
ಒಪ್ಪಿರುತ್ತಾರೆ.

Sd/-

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ

ಹಾನಗಲ್ಲ.

ಸಾಕ್ಷಿದಾರರ ಸಹಿ